ಟೆಕ್ಸ್‌ಟೈಲ್ ಪಾರ್ಕ್ ಸ್ಥಾಪನೆ.

1033 (1532); ಶ್ರೀ ಆರಬೈಲ್ ಶಿವರಾಮ್ ಹೆಬ್ಬಾರ್ (ಯಲ್ಲಾಪುರ)

ಅ) ರಾಜ್ಯದಲ್ಲಿ ಎಲ್ಲೆಲ್ಲಿ ಟೆಕ್ಸ್‌ಟೈಲ್ ಪಾರ್ಕನ್ನು ನಿರ್ಮಿಸಲಾಗಿದೆ (ಜಿಲ್ಲಾವಾರು ಮಾಹಿತಿ ನೀಡುವುದು);

ಆ) ಟೆಕ್ಸ್‌ಟೈಲ್ ಪಾರ್ಕನ್ನು ನಿರ್ಮಿಸಲು ಅಗತ್ಯವಿರುವ ನಿರ್ದಿಷ್ಟ ಮಾನದಂಡ ಗಳೇನು;

ಇ) ಉತ್ತರ ಕನ್ನಡ ಭಾಗದಲ್ಲಿ ವಿದ್ಯಾವಂತ ನಿರುದ್ಯೋಗಿಗಳಿಗೆ ಅನುಕೂಲ ವಾಗುವಂತೆ ಟೆಕ್ಸ್‌ಟೈಲ್ ಪಾರ್ಕ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ಯಾವ ಸ್ಥಳದಲ್ಲಿ ನಿರ್ಮಿಸಲಾಗುವುದು.

ಉ) ಅವುಗಳನ್ನು ಎಷ್ಟು ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು?

ಶ್ರೀ ಬಾಬುರಾವ ಚಿಂಚನಸೂರ್ (ಜವಳಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು)

ಅ) ರಾಜ್ಯದ ಎರಡು ಜಿಲ್ಲೆಗಳಲ್ಲಿ ಜವಳಿ ಪಾರ್ಕ ಪ್ರಾರಂಭಿಸಲಾಗಿದೆ.

1. ದೊಡ್ಡಬಳ್ಳಾಪುರ ಇಂಟಿಗ್ರೇಟೆಡ್ ಟೆಕ್ಸ್‌ಟೈಲ್ ಪಾರ್ಕ, ಬೆಂಗಳೂರು ಗ್ರಾಮಾಂತರ ಜಿಲ್ಲೆ.

2. ಗುಲಬರ್ಗಾ ಟೆಕ್ಸ್‌ಟೈಲ್ ಪಾರ್ಕ; ಗುಲಬರ್ಗಾ ಜಿಲ್ಲೆ ಪ್ರಗತಿಯಲ್ಲಿದ.

ಆ) ಟೆಕ್ಸ್‌ಟೈಲ್ ಪಾರ್ಕ್ ಪ್ರಾರಂಭಿಸಲು ಜವಳಿ ಉದ್ದಿಮೆದಾರರು ಕನಿಷ್ಠ 5 ಸದಸ್ಯರನ್ನು ಒಳಗೊಂಡು ಕಂಪನಿ ಆಕ್ಟ್ ಅನ್ವಯ ಸ್ಪೆಷಲ್ ಪರ್ಪಸ್ ವೆಹಿ ಕಲ್ (ಎಸ್.ಪಿ.ವಿ) ರಚಿಸಿಕೊಂಡು ಕೈಗಾರಿಕೆಗೆ ಬೇಕಾದ ಕನಿಷ್ಠ 15 ಎಕರೆ ಜಮೀನನ್ನು ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಅಥವಾ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಅಥವಾ ಕೈಗಾ

ರಿಕಾ ಜಮೀನು ಕಂಪನಿ ಹೆಸರಿನಲ್ಲಿ ಹೊಂದಿ, ಬೇಡಿಕೆ ಪ್ರಸ್ತಾವನೆ ಬಂದಲ್ಲಿ ನಿಯಮಾನುಸಾರ ಪರಿಶೀಲಿಸಲಾಗುವುದು.

ಇ) ಅಂತಹ ಪ್ರಸ್ತಾವನೆ ಇರುವುದಿಲ್ಲ.

ಈ) ಅನ್ವಯಿಸುವುದಿಲ್ಲ.

ಉ) ಅನ್ವಯಿಸುವುದಿಲ್ಲ.

ಸರ್ವೇಯರ್‌ಗಳ ನೇಮಕಾತಿ

1034 (1533); ಶ್ರೀ ಅರಬೈಲ್ ಶಿವರಾಮ್ ಹೆಬ್ಬಾರ್ (ಯಲ್ಲಾಪುರ)

ಅ) ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ವೇಯರ್‌ಗಳ ಮತ್ತು ಖಾಲಿಯಿರುವ ಸರ್ವೇಯರ್ ಹುದ್ದೆಗಳು ಎಷ್ಟು (ಜಿಲ್ಲಾವಾರು ಹಾಗೂ ಉತ್ತರ ಕನ್ನಡ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಪರವಾನಗಿ ಪಡೆದ ಸರ್ವೇಯರ್‌ಗಳೆಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸರ್ವೇಯರ್‌ಗಳ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಆ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮತ್ತು ಖಾಲಿ ಇರುವ ಭೂಮಾಪಕರ ಹುದ್ದೆಗಳ ಜಿಲ್ಲಾವಾರು ವಿವರದ ತಃಖ್ತೆಯನ್ನು ಅನುಬಂಧ–1ರಲ್ಲಿ ಲಗತ್ತಿಸಿದೆ.

ಉತ್ತರ ಕನ್ನಡ ಜಿಲ್ಲೆಯ ತಾಲ್ಲೂಕುವಾರು ಮಾಹಿತಿಯನ್ನು ಅನುಬಂಧ–2 ರಲ್ಲಿ ಲಗತ್ತಿಸಿದೆ.